# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸಾಲದ ಹೊರೆಯಿಂದ ಸಂಕಷ್ಟಕ್ಕೆ ಒಳಗಾಗಿ ಆತ್ಮಹತ್ಯೆ ಮಾಡಿಕೊಂಡು ಮೃತರಾದ ರೈತರ ಪತ್ನಿಗೆ ರೂ..2000/–ಗಳ ಮಾಸಾಶನ ನೀಡುವ ಕುರಿತು.

ಓದಲಾಗಿದೆ: 1) ಸರ್ಕಾರದ ಆದೇಶ ಸಂಖ್ಯೆ: ಕೃತೋಇ/280/ಕೃಉಇ/2003, ದಿನಾಂಕ:18–07–2003

2) ಸರ್ಕಾರದ ಆದೇಶ ಸಂಖ್ಯೆ: ಕೃಇ/57/ಕೃಉಇ/2015, ದಿನಾಂಕ:17–07–2015

3) ಸರ್ಕಾರಿ ಆದೇಶ ಸಂಖ್ಯೆ ಆರ್‌ಡಿ 74 ಡಿ ಎಸ್ ಪಿ 2013 ದಿನಾಂಕ 30–08–2013

4) ರಾಜ್ಯದಲ್ಲಿ ಬರ ಪರಿಸ್ಥಿತಿಯ ಹಿನ್ನಲೆಯಲ್ಲಿ ರೈತರಿಗೆ ಹೆಚ್ಚಿನ ಪರಿಹಾರ ನೀಡಲು ಮಾನ್ಯ ಮುಖ್ಯ ಮಂತ್ರಿಯವರ ಘೋಷಣೆ

ಪ್ರಸ್ತಾವನೆ :

ಬೆಳೆಹಾನಿ, ಸಾಲಭಾದೆ, ಬೆಲೆಕುಸಿತ ಇತ್ಯಾದಿ ಕಾರಣಗಳಿಂದ ಸಂಕಷ್ಟಕ್ಕೊಳಗಾದ ಹಲವಾರು ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದನ್ನು ಗಮನಿಸಿದ ಸರ್ಕಾರ ಮೇಲೆ ಓದಲಾದ ಆದೇಶ (1) ಮತ್ತು (2) ರನ್ವಯ ಆತ್ಮಹತ್ಯೆಗೆ ಸಾಲ ನೀಡುವ ಸಂಸ್ಥೆಗಳಿಂದ ಪಡೆದ ಸಾಲದ ಹೊರೆಯೇ ಸಂಭವನೀಯ ಕಾರಣವೆಂಬ ವಿಷಯವನ್ನು ದೃಢೀಕರಣ ಮಾಡಿಕೊಂಡು, ಈ ಬಗ್ಗೆ ದೃಢೀಕರಣ ಪತ್ರ ನೀಡುವ ಕುರಿತಂತೆ ಪ್ರತಿ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಸಮಿತಿಯ ನಿರ್ಣಯದ ಆಧಾರದ ಮೇರೆಗೆ ಸಾಲದ ಬಾದೆಯಿಂದ ಸಂಕಷ್ಟಕ್ಕೊಳಗಾಗಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳಿಗೆ ಕೃಷಿ ಇಲಾಖೆಯಿಂದ ಪ್ರಸ್ತುತ ರೂ.2.00 ಲಕ್ಷಗಳ ಪರಿಹಾರ ಧನವನ್ನು ನೀಡಲಾಗುತ್ತಿದೆ. ಪ್ರಸ್ತುತ ರಾಜ್ಯದಲ್ಲಿ ಇರುವ ಬರ ಪರಿಸ್ಥಿತಿಯ ಹಿನ್ನೆಲೆಯಲ್ಲಿ ರೈತರ ಆತ್ಮಹತ್ಯೆ ವಿಷಯವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿ ಆತ್ಮಹತ್ಯೆ ಮಾಡಿಕೊಂಡ ರೈತರ ಕುಟುಂಬಗಳ ಹಿತಾಸಕ್ತಿ ಕಾಪಾಡುವ ನಿಟ್ಟಿನಲ್ಲಿ ಈಗಾಗಲೇ ಕೃಷಿ ಇಲಾಖೆಯಿಂದ ರೈತರ ಆತ್ಮಹತ್ಯೆ ಪ್ರಕರಣಗಳಡಿ ಗುರುತಿಸಿ ಪರಿಹಾರಧನ ಪಡೆದಿರುವ ರೈತ ಪತ್ನಿಗೆ ಮಾತ್ರವೇ ಮೇಲೆ ಓದಲಾದ ಆದೇಶ (3) ಅನ್ವಯ ನೀಡಲಾಗುತ್ತಿದ್ದ ರೂ.500/–ಗಳ ವಿಧವಾ ಮಾಸಾಶನವನ್ನು ರೂ.2000/–ಕ್ಕೆ ಹೆಚ್ಚಿಸಲು ಸರ್ಕಾರ ತೀರ್ಮಾನಿಸಿರುವ ಹಿನ್ನಲೆಯಲ್ಲಿ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂ.ಆರ್.ಡಿ.64/ಡಿಎಸ್‌ಪಿ/2015 ದಿನಾಂಕ: 13/11/2015

ಬೆಳೆಹಾನಿ, ಸಾಲಭಾದೆ, ಬೆಲೆಕುಸಿತ ಇತ್ಯಾದಿ ಕಾರಣಗಳಿಂದ ಸಂಕಷ್ಟಕ್ಕೊಳಗಾದ ಹಲವಾರು ರೈತರು ಆತ್ಮಹತ್ಯೆ ಮಾಡಿಕೊಳ್ಳುತ್ತಿರುವುದನ್ನು ಗಮನಿಸಿದ ಸರ್ಕಾರ, ರಾಜ್ಯದಲ್ಲಿ ಇರುವ ಬರ ಪರಿಸ್ಥಿತಿಯ ಹಿನ್ನಲೆಯಲ್ಲಿ ರೈತ ಕುಟುಂಬಗಳಿಗೆ ಹೆಚ್ಚಿನ ಆರ್ಥಿಕ ಪರಿಹಾರ ನೀಡಲು, ಸಾಲದ ಭಾದೆಯಿಂದ ಆತ್ಮಹತ್ಯೆ ಮಾಡಿಕೊಂಡು ಮೃತರಾದ ರೈತರ ಪತ್ನಿಯರಿಗೆ ನೀಡಲಾಗುತ್ತಿದ್ದ ರೂ.500/–ಗಳ ವಿಧವಾ ಮಾಸಾಶನವನ್ನು ರೂ.2000/–ಕ್ಕೆ ಹೆಚ್ಚಿಸಿ ತಕ್ಷಣದಿಂದಲೇ ಜಾರಿಗೆ ಬರುವಂತೆ ಆದೇಶಿಸಿದೆ.

ಸದರಿ ಸೌಲಭ್ಯ ಪಡೆಯಲು :

1. ಉದ್ದೇಶಿತ ಫಲಾನುಭವಿಯು ಸಾಲದ ಭಾದೆಯಿಂದ ಆತ್ಮಹತ್ಯೆ ಮಾಡಿಕೊಂಡು ಮೃತರಾದ ರೈತನ ಪತ್ನಿಯಾಗಿರಬೇಕು.
2. ಕೃಷಿ ಇಲಾಖೆಯಿಂದ ರೈತರ ಆತ್ಮಹತ್ಯೆ ಪ್ರಕರಣಗಳಡಿ ಗುರುತಿಸಿ ಪರಿಹಾರ ಧನ ಪಡೆದಿರಬೇಕು.

3. ಈಗಾಗಲೇ ಇತರೇ ಸಾಮಾಜಿಕ ಭದ್ರತಾ ಯೋಜನೆಗಳಡದ ವಿಧವಾ ವೇತನ, ಸಂಧ್ಯಾ ಸುರಕ್ಷಾ, ಇಂದಿರಾ ಗಾಂಧಿ ರಾಷ್ಟ್ರೀಯ ವೃದ್ಧಾಪ್ಯ ವೇತನ ಮತ್ತು ಅಂಗವಿಕಲ ವೇತನದಡಿ ಸೌಲಭ್ಯ ಪಡೆಯುತ್ತಿದ್ದಲ್ಲಿ ಪ್ರಸ್ತುತ ಪಡೆಯುತ್ತಿರುವ ವೇತನವನ್ನು ರದ್ದು ಗೊಳಿಸಲಾಗುವುದು.
4. ಈ ಮಾಸಿಕ ಸಹಾಯಧನವನ್ನು ಅರ್ಜಿದಾರರ ವಾಸಸ್ಥಳ ವ್ಯಾಪ್ತಿಗೆ ಬರುವ ತಹಸೀಲ್ದಾರರು ಮಂಜೂರು ಮಾಡತಕ್ಕದ್ದು.
5. ಈ ಮಾಸಿಕ ಸಹಾಯಧನವನ್ನು ಫಲಾನುಭವಿಯ ಬ್ಯಾಂಕ್ ಖಾತೆಗೆ ಖಜಾನೆಯಿಂದ ಪ್ರತಿ ತಿಂಗಳು ವರ್ಗಾಯಿಸತಕ್ಕದ್ದು.
6. ಫಲಾನುಭವಿಯು ಮರಣ ಹೊಂದಿದ ಪಕ್ಷದಲ್ಲಿ ಮಾಸಿಕ ಸಹಾಯಧನವನ್ನು ರದ್ದುಪಡಿಸಲಾಗುವುದು.
7. ಈ ಯೋಜನೆಯಡಿ ತಗಲುವ ವೆಚ್ಚವನ್ನು 2015-16ನೇ ಸಾಲಿನಲ್ಲಿ ವಿಧವಾ ವೇತನ ಯೋಜನೆಯ ಲೆಕ್ಕ ಶೀರ್ಷಿಕೆಯಡಿ "2235-60-102-2-01" ರಡಿ ಭರಿಸತಕ್ಕದ್ದು.

ಈ ಆದೇಶವನ್ನು ಕಡತ ಸಂಖ್ಯೆ ಕಂ.ಇ/164/ಡಿಎಸ್‌ಪಿ/2015 ರಲ್ಲಿನ ಆರ್ಥಿಕ ಇಲಾಖೆಯ ಜನರಲ್ ನಂ.4389/2015 ದಿನಾಂಕ: 13/11/2015 ರಲ್ಲಿ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರು ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಎಸ್.ಕ್ಯಾತ್ಯಾಯಿನಿ ದೇವಿ) 13/11/15
ಪೀಠಾಧಿಕಾರಿ
ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳು
ಕಂದಾಯ ಇಲಾಖೆ
ಬೆಂಗಳೂರು

ಇವರಿಗೆ :

ಸಂಕಲನಕಾರರು ,ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 500 ಪ್ರತಿಗಳನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿಗಳ ನಿರ್ದೇಶನಾಲಯಕ್ಕೆ ಕಳುಹಿಸಬೇಕೆಂದು ಕೋರಿದೆ.

ಪ್ರತಿಯನು :

1. ಮಹಾಲೇಖಪಾಲರು(ಲೆಕ್ಕಪತ್ರ ಮತ್ತು ತಪಾಸಣೆ)(ಎ ಮತ್ತು ಇ),ಕರ್ನಾಟಕ ಬೆಂಗಳೂರು
2. ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ವಿಧಾನಸೌಧ ಬೆಂಗಳೂರು
3. ಮಾನ್ಯ ಮುಖ್ಯ ಮಂತ್ರಿಗಳ ಪ್ರಧಾನ ಕಾರ್ಯದರ್ಶಿಗಳು,ವಿಧಾನಸೌಧ ಬೆಂಗಳೂರು
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ ಬೆಂಗಳೂರು
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
6. ಆಯುಕ್ತರು, ಕೃಷಿ ಇಲಾಖೆ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿಗಳು, (ಆಯವ್ಯಯ ಮತ್ತು ಸಂಪನ್ಮೂಲ)ವಿಧಾನಸೌಧ ಬೆಂಗಳೂರು
8. ಪ್ರಾದೇಶಿಕ ಆಯುಕ್ತರು,ಬೆಂಗಳೂರು,ಮೈಸೂರು,ಬೆಳಗಾವಿ, ಗುಲ್ಬರ್ಗ
9. ಎಲ್ಲಾ ಜಿಲ್ಲಾಧಿಕಾರಿಗಳು,
10. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
11. ಎಲ್ಲಾ ಉಪ ವಿಭಾಗಾಧಿಕಾರಿಗಳು/ತಹಸೀಲ್ದಾರರು
12. ಹೆಚ್ಚುವರಿ ಪ್ರತಿ ಮತ್ತು ರಕ್ಷಾ ಕಡತ